# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 841(937) |
| **ಸದಸ್ಯರ ಹೆಸರು** | : | ಶ್ರೀ ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 24.08.2026 |
| **ಉತ್ತರಿಸುವ ಸಚಿವರು** | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಹೆಣ್ಣು ಮಕ್ಕಳು ಪ್ರೌಢಶಾಲಾ ಹಂತದಲ್ಲಿ ಶಾಲೆ ತೊರೆಯುವಿಕೆ (ಡ್ರಾಪ್ ಔಟ್) ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಾಲೆ ತೊರೆಯುವಿಕೆ (ಡ್ರಾಪ್ ಔಟ್) ಶೇಕಡವಾರು ಪ್ರಮಾಣ ಎಷ್ಟು; (ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರೌಢಶಾಲಾ ಹಂತದಲ್ಲಿ ಹೆಣ್ಣು ಮಕ್ಕಳು ಶಾಲೆಯಿಂದ ಹೊರಗುಳಿಯುವ ಪ್ರಮಾಣವು ಕ್ರಮೇಣ ಕಡಿಮೆಯಾಗಿದೆ. ವಿವರ ಈ ಕೆಳಕಂಡಂತಿದೆ;
<table>
<tr><th>ಕ್ರ. ಸಂ.</th><th>ವರ್ಷ</th><th>ಶಾಲೆ ಬಿಟ್ಟ ಹೆಣ್ಣುಮಕ್ಕಳ (ಡ್ರಾಪ್ ಔಟ್) ಪ್ರಮಾಣದ ಶೇಕಡವಾರು ವಿವರ</th></tr>
<tr><td>01</td><td>2023-2024</td><td>19.74</td></tr>
<tr><td>02</td><td>2024-2025</td><td>14.92</td></tr>
<tr><td>03</td><td>2025-2026</td><td>13.79</td></tr>
</table>
</td></tr>
<tr><td>ಆ)</td><td>ಇದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಪ್ರೌಢ ಶಾಲಾ ಹಂತದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ತಡೆಯಲು ಇಲಾಖೆಯಿಂದ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ;
<ul>
<li>ಶಾಲೆಗಳು ಲಭ್ಯತೆ ಇಲ್ಲದ ಪ್ರದೇಶಗಳಲ್ಲಿ ಹೊಸ ಸರ್ಕಾರಿ ಶಾಲೆಗಳನ್ನು ಪ್ರಾರಂಭಿಸುವುದರ ಜೊತೆಗೆ, ಪ್ರಸ್ತುತ ಇರುವ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲಾ ಹಂತಕ್ಕೆ ಉನ್ನತೀಕರಿಸಲಾಗುತ್ತಿದೆ. ಇದರಿಂದ ಎಲ್ಲಾ ಮಕ್ಕಳಿಗೂ ಶಿಕ್ಷಣದ ಸಾರ್ವತ್ರಿಕ ಲಭ್ಯತೆಯನ್ನು ಖಾತ್ರಿಪಡಿಸುವ ಮೂಲಕ ಶಾಲೆಯಿಂದ ಹೊರಗುಳಿಯುವಿಕೆ ಪ್ರಮಾಣವನ್ನು ಕಡಿಮೆ ಮಾಡಲು ಕ್ರಮವಹಿಸಲಾಗುತ್ತಿದೆ.</li>
<li>14 ವರ್ಷ ಮೇಲ್ಪಟ್ಟ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ರಾಷ್ಟ್ರೀಯ ಮುಕ್ತ ಶಾಲಾ ಶಿಕ್ಷಣ ಸಂಸ್ಥೆ (NIOS)/ಕರ್ನಾಟಕ ಮುಕ್ತ ಶಾಲಾ(KOS) ಶಿಕ್ಷಣ ವ್ಯವಸ್ಥೆಯ ಮೂಲಕ ಶಿಕ್ಷಣದ ಮುಖ್ಯವಾಹಿನಿಗೆ ತರಲು ಕ್ರಮವಹಿಸಲಾಗುತ್ತಿದೆ. ಈ ಉದ್ದೇಶಕ್ಕಾಗಿ ಕರ್ನಾಟಕದ ಪಬ್ಲಿಕ್ ಶಾಲೆಗಳು ಹಾಗೂ ಜೂನಿಯರ್ ಕಾಲೇಜುಗಳಲ್ಲಿ ಬ್ಲಾಕ್ ಮಟ್ಟದಲ್ಲಿ ಒಟ್ಟು 220 ಅಧ್ಯಯನ ಕೇಂದ್ರಗಳನ್ನು ಗುರುತಿಸಲಾಗಿದೆ.</li>
<li>ಬೀದಿ ಮಕ್ಕಳು, ಕಸ ಸಂಗ್ರಹಿಸುವ ಮಕ್ಕಳು, ಬಾಲ ಕಾರ್ಮಿಕರು, ಅನಾರೋಗ್ಯ ಪೀಡಿತ ಮಕ್ಕಳು, ವಿಶೇಷ ಅಗತ್ಯವುಳ್ಳ ಮಕ್ಕಳು, ಅನಾಥ ಮಕ್ಕಳು ಹಾಗೂ ಇತರೆ ರಾಜ್ಯಗಳು/ಜಿಲ್ಲೆಗಳಿಂದ ವಲಸೆ ಬಂದಿರುವ ಮಕ್ಕಳು ಸೇರಿದಂತೆ ನಿಯಮಿತ ಶಾಲೆಗಳಿಗೆ ಹಾಜರಾಗಲು ಸಾಧ್ಯವಾಗದ ಮಕ್ಕಳನ್ನು ಅವರ ಚಲನವಲನ, ಕಲಿಕಾ ಮಟ್ಟ ಹಾಗೂ ಅಗತ್ಯತೆಗಳ ಆಧಾರದ ಮೇಲೆ ನೇತಾಜಿ ಆವಾಸೀಯ ವಿದ್ಯಾಲಯ, ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ (KGBV), KKGBV ವಸತಿನಿಲಯಗಳು ಹಾಗೂ ಟ್ರಾನ್ಸಿಟ್ ಹೋಮ್‌ಗಳು ಸೇರಿದಂತೆ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಸೌಲಭ್ಯಗಳ ಮೂಲಕ ದಾಖಲಿಸಿ ಶಿಕ್ಷಣದ ಮುಖ್ಯವಾಹಿನಿಗೆ ತರಲಾಗುತ್ತಿದೆ.</li>
</ul>
</td></tr>
</table>

- ಅರಣ್ಯ ಪ್ರದೇಶ, ಗುಡ್ಡಗಾಡು ಪ್ರದೇಶ, ನದಿ ದಂಡೆಗಳು, ಕಾಲುವೆಗಳು ಹಾಗೂ ರಾಷ್ಟ್ರೀಯ/ರಾಜ್ಯ ಹೆದ್ದಾರಿಗಳನ್ನು ದಾಟಿ ಸಮೀಪದ ಶಾಲೆಗಳಿಗೆ ತೆರಳಬೇಕಾದಂತಹ ಪ್ರದೇಶಗಳಲ್ಲಿ ಶಾಲೆಗಳ ಪ್ರವೇಶಾವಕಾಶ ಸೀಮಿತವಾಗಿರುವುದರಿಂದ, ಅಂತಹ ಮಕ್ಕಳಿಗೆ ಸಾರಿಗೆ ಮತ್ತು ಸಹಾಯಕ ಭತ್ಯೆ (Transport and Escort Allowance) ಒದಗಿಸಲಾಗುತ್ತಿದೆ. ಇದರಿಂದ ಮಕ್ಕಳ ಶಾಲಾ ಹಾಜರಾತಿ ಹಾಗೂ ದಾಖಲಾತಿಯನ್ನು ಹೆಚ್ಚಿಸಿ, ಶಾಲೆಯಲ್ಲಿ ಮುಂದುವರಿಯುವಿಕೆಯನ್ನು ಖಾತ್ರಿಪಡಿಸಲು ಕ್ರಮವಹಿಸಲಾಗುತ್ತಿದೆ.
- ವಿಶೇಷ ಅಗತ್ಯವುಳ್ಳ ಮಕ್ಕಳನ್ನು ಶಿಕ್ಷಣದ ಮುಖ್ಯವಾಹಿನಿಗೆ ತರಲು ಸಮಗ್ರ ಶಿಕ್ಷಣ ಕರ್ನಾಟಕ (SSK) ವತಿಯಿಂದ BIERT ಮೂಲಕ ಅಗತ್ಯ ಬೆಂಬಲವನ್ನು ಒದಗಿಸಲಾಗುತ್ತಿದೆ. ಮಕ್ಕಳ ಅಂಗವೈಕಲ್ಯದ ಸ್ವರೂಪದ ಆಧಾರದ ಮೇಲೆ ಸಾರಿಗೆ ಭತ್ಯೆ, ಸಹಾಯಕ ಭತ್ಯೆ, ಒದುಗರ ಭತ್ಯೆ (Reader Allowance) ಹಾಗೂ ಹೆಣ್ಣು ಮಕ್ಕಳ ಭತ್ಯೆ ಸೇರಿದಂತೆ ವಿದ್ಯಾರ್ಥಿ ನಿರ್ದಿಷ್ಟ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ತೀವ್ರ ಅಂಗವೈಕಲ್ಯ ಅಥವಾ ತೀವ್ರ ಚಲನಶೀಲತಾ ಅಂಗವೈಕಲ್ಯ ಹೊಂದಿರುವ ಮಕ್ಕಳಿಗೆ ಅಗತ್ಯ ಕೌಶಲ್ಯ ತರಬೇತಿಯೊಂದಿಗೆ ಮನೆ ಆಧಾರಿತ ಶಿಕ್ಷಣ (Home-based Schooling) ಸೌಲಭ್ಯವನ್ನು ಒದಗಿಸಲಾಗುತ್ತಿದೆ.
- ಮಕ್ಕಳ ಶಾಲಾ ಹಾಜರಾತಿಯನ್ನು ಉತ್ತೇಜಿಸಲು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ಪ್ರೌಢಶಾಲಾ ಹಂತದವರೆಗಿನ ವಿದ್ಯಾರ್ಥಿಗಳಿಗೆ ವಿದ್ಯಾ ವಿಕಾಸ ಯೋಜನೆಯಡಿ ಮಧ್ಯಾಹ್ನದ ಬಿಸಿಯೂಟ, ಹಾಲು, ಮೊಟ್ಟೆ, ಬಾಳೆಹಣ್ಣು, ಉಚಿತ ಪಠ್ಯಪುಸ್ತಕಗಳು, ಕಾರ್ಯಪುಸ್ತಕಗಳು, ಬೋಧನಾ-ಕಲಿಕಾ ಸಾಮಗ್ರಿಗಳು (TLM), ಶೂ-ಸಾಕ್ಸ್, ಎರಡು ಜೋಡಿ ಸಮವಸ್ತ್ರಗಳು ಹಾಗೂ ವಿಟಮಿನ್ ಮಾತ್ರೆಗಳು ಮುಂತಾದ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಇದರಿಂದ ಕುಟುಂಬಗಳ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆ ಮಾಡಿ, ಮಕ್ಕಳ ದಾಖಲಾತಿ ಹಾಗೂ ಹಾಜರಾತಿಯನ್ನು ಹೆಚ್ಚಿಸಲು ಕ್ರಮವಹಿಸಲಾಗುತ್ತಿದೆ.
- ಕಲಾ ಉತ್ಸವ (Kala Utsav) ಹಾಗೂ ಪ್ರತಿಭಾ ಕಾರಂಜಿ ಕಾರ್ಯಕ್ರಮಗಳಡಿ ಶಾಲೆಗಳಲ್ಲಿನ ಎಲ್ಲಾ ಮಕ್ಕಳಿಗೆ ವಿವಿಧ ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಸಾಹಿತ್ಯಕ ಸ್ಪರ್ಧೆಗಳಲ್ಲಿ ವಿವಿಧ ಹಂತಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ, ಅವರ ಪ್ರತಿಭೆಯನ್ನು ಉತ್ತೇಜಿಸಲಾಗುತ್ತಿದೆ.
- ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ನಿರಂತರ ಡಿಜಿಟಲ್ ಹಾಜರಾತಿ ವ್ಯವಸ್ಥೆಯನ್ನು (Nirantara Digital Attendance System) ಪರಿಚಯಿಸಿದೆ. ಇದು ಕೃತಕ ಬುದ್ಧಿಮತ್ತೆ (AI) ಆಧಾರಿತ ಹಾಜರಾತಿ ನಿರ್ವಹಣಾ ವ್ಯವಸ್ಥೆಯಾಗಿದ್ದು, ಪ್ರತಿದಿನದ ವಿದ್ಯಾರ್ಥಿಗಳ ಹಾಜರಾತಿಯನ್ನು ತ್ವರಿತವಾಗಿ ಮತ್ತು ನಿಖರವಾಗಿ ದಾಖಲಿಸಲು ಸಹಾಯ ಮಾಡುತ್ತದೆ.
- ಅಂತರಜಿಲ್ಲಾ ಹಾಗೂ ಅಂತಾರಾಜ್ಯ ವಲಸೆಯು ಕರ್ನಾಟಕದಲ್ಲಿ ಮಕ್ಕಳು ಶಾಲೆಯಿಂದ ಹೊರಗುಳಿಯಲು ಕಾರಣವಾಗುವ ಪ್ರಮುಖ ಅಂಶಗಳಲ್ಲಿ ಒಂದಾಗಿದೆ. ಈ ಸಮಸ್ಯೆಯನ್ನು ಪರಿಹರಿಸುವ ನಿಟ್ಟಿನಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು "ವಲಸೆ ಮಕ್ಕಳು ಹಾಗೂ ವಲಸೆ ಕಾರ್ಮಿಕರ ಮಕ್ಕಳ ಶಿಕ್ಷಣ ಹಕ್ಕು ನೀತಿ- 2019" ಅನ್ನು ರೂಪಿಸಿದೆ. ಈ ನೀತಿಯು ಪ್ರತಿಯೊಬ್ಬ ಮಗುವಿಗೂ ಶಿಕ್ಷಣದ

| | | |
|---|---|---|
| | | ಹಕ್ಕನ್ನು ಖಾತ್ರಿಪಡಿಸುವ ರಾಜ್ಯ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. |
| ಇ) | ಇದರ ಬಗ್ಗೆ ಅರಿವು ಮೂಡಿಸಲು ಸರ್ಕಾರದ ಕ್ರಮವೇನು? | ಇದರ ಬಗ್ಗೆ ಅರಿವು ಮೂಡಿಸಲು ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ;<br><br>**ವಿಶೇಷ ದಾಖಲಾತಿ ಅಭಿಯಾನ**<br><br>• 2025ರ ಮೇ ತಿಂಗಳಲ್ಲಿ ರಾಜ್ಯಾದ್ಯಂತ ವಿಶೇಷ ದಾಖಲಾತಿ ಅಭಿಯಾನ (Special Enrolment Drive) ಹಮ್ಮಿಕೊಳ್ಳಲಾಯಿತು. ಶೈಕ್ಷಣಿಕ ವರ್ಷದ ಆರಂಭಕ್ಕೂ ಮುನ್ನ ಸಾಕ್ಷರತೆ ಹಾಗೂ ಶಿಕ್ಷಣದ ಮಹತ್ವದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಈ ಅಭಿಯಾನವನ್ನು ಕೈಗೊಳ್ಳಲಾಯಿತು. ಅಲ್ಲದೆ, ಹಿಂದಿನ ಶೈಕ್ಷಣಿಕ ವರ್ಷದಲ್ಲಿ 1ನೇ ತರಗತಿಯಿಂದ 12ನೇ ತರಗತಿಯವರೆಗೆ ಉತ್ತೀರ್ಣ/ಮುಂದಿನ ತರಗತಿಗೆ ಉತ್ತೀರ್ಣಗೊಂಡಿದ್ದರೂ ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ದಾಖಲಾತಿಯಾಗದ ಮಕ್ಕಳನ್ನು ಶಾಲೆಗೆ ದಾಖಲಿಸಲು ಸಾಮಾನ್ಯ ದಾಖಲಾತಿ ಆಂದೋಲನ ವನ್ನು 2025ರ ಜೂನ್ ಮತ್ತು ಜುಲೈ ತಿಂಗಳಲ್ಲಿ ಹಮ್ಮಿಕೊಳ್ಳಲಾಯಿತು.<br><br>**ಮಧ್ಯಂತರ ತೊರೆಯುವಿಕೆ ತಡೆಗಟ್ಟುವ ಅಭಿಯಾನ:**<br><br>• ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಮಕ್ಕಳು ಶಾಲೆಯಿಂದ ಹೊರಗುಳಿಯುವುದನ್ನು ತಡೆಗಟ್ಟಲು, 6 ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಜಾಗೃತಿ ದಾಖಲಾತಿ ಅಭಿಯಾನವನ್ನು (Jagruti Dakalati Abhiyana) ಹಮ್ಮಿಕೊಳ್ಳಲಾಗಿತ್ತು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಎಲ್ಲಾ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ನಿರ್ದೇಶನ ನೀಡಲಾಗಿದೆ. ಇದರಡಿ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳು ಹಾಗೂ ವಲಸೆ ಮಕ್ಕಳನ್ನು ಪುನಃ ದಾಖಲಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೆ, 2026ರ ಮೇ ತಿಂಗಳಲ್ಲಿ ಸಮುದಾಯ ಹಾಗೂ ಸಾರ್ವಜನಿಕ ಪ್ರತಿನಿಧಿಗಳ ಸಹಯೋಗದೊಂದಿಗೆ ಬೇಸಿಗೆ ಶಿಬಿರವನ್ನು ಆಯೋಜಿಸಿ, ಗುರುತಿಸಲಾದ ಅರ್ಹ ಮಕ್ಕಳು ಹಾಗೂ ಶಾಲೆ/ಕಾಲೇಜು ತೊರೆದ ಮಕ್ಕಳನ್ನು ಶಿಕ್ಷಣದತ್ತ ಆಕರ್ಷಿಸಿ, ಹೊಸದಾಗಿ ದಾಖಲಾದ ಮಕ್ಕಳನ್ನು ಶಾಲಾ ಪರಿಸರಕ್ಕೆ ಹೊಂದಿಕೊಳ್ಳುವಂತೆ ಸಿದ್ಧಪಡಿಸುವ ಕ್ರಮ ಕೈಗೊಳ್ಳಲಾಗಿದೆ.<br><br>**ಪೋಷಕರು ಮತ್ತು ಮಕ್ಕಳಲ್ಲಿ ಅರಿವು ಮೂಡಿಸುವುದು:**<br>• ಈ ಅಭಿಯಾನದ ಅನುಷ್ಠಾನಕ್ಕಾಗಿ ಶಾಲಾ ಹಂತದಲ್ಲಿ ಸಮಗ್ರ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ. ನಿಯಮಿತವಾಗಿ ನಡೆಯುವ SDMC/CDC ಹಾಗೂ ಪೋಷಕ-ಶಿಕ್ಷಕರ ಸಭೆಗಳ ಮೂಲಕ ಶಿಕ್ಷಣದ ಮಹತ್ವದ ಕುರಿತು ಪೋಷಕರು ಮತ್ತು ಮಕ್ಕಳಲ್ಲಿ ಅರಿವು ಮೂಡಿಸಲಾಗುತ್ತಿದೆ. |

**ಸಂಖ್ಯೆ: ಇಪಿ 271 ಎಸ್‌ಇಎಸ್ 2026**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು